# ಮೈಸೂರು ವಿಶ್ವವಿದ್ಯಾನಿಲಯ

(ಸ್ಥಾಪನೆ-1916)
(4ನೇ ಆವೃತ್ತಿಯ ನ್ಯಾಕ್ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್.ಐ.ಆರ್.ಎಫ್.–2023: ವಿಶ್ವವಿದ್ಯಾನಿಲಯ ವರ್ಗದಲ್ಲಿ 44ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 71ನೇ ಸ್ಥಾನ)

ಸಂಖ್ಯೆ: ಪ.ವಿ.8.1/PGB/75/2009–10

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು–570 005
ದಿನಾಂಕ: 13–05–2024

## ಅಧಿಸೂಚನೆ

ವಿಷಯ: ಜೂನ್/ಜುಲೈ–2024ರ ಮಾಹೆಯಲ್ಲಿ ನಡೆಯಲಿರುವ ಒಂದನೇ ಸೆಮಿಸ್ಟರ್ ಎಂ.ಬಿ.ಎ ಸ್ನಾತಕೋತ್ತರ ಪದವಿ ಪರೀಕ್ಷೆಗೆ ಶುಲ್ಕ ಪಾವತಿ ಮಾಡುವ ಮತ್ತು ಅಭ್ಯರ್ಥನಾ ಪತ್ರ ಸಲ್ಲಿಸುವ ಬಗ್ಗೆ.

ಉಲ್ಲೇಖ: ವಿ.ವಿ.ಅಧಿಸೂಚನೆ ಸಂಖ್ಯೆ:ಎ.ಸಿ.7(ಎ)/108/2014–15, ದಿನಾಂಕ: 13–02–2024.

*****

ಜೂನ್/ಜುಲೈ–2024ರ ಮಾಹೆಯಲ್ಲಿ ನಡೆಯಲಿರುವ ಒಂದನೇ ಸೆಮಿಸ್ಟರ್ ಎಂ.ಬಿ.ಎ ಸ್ನಾತಕೋತ್ತರ ಪದವಿ ಪರೀಕ್ಷೆಗಳಗೆ ಪರೀಕ್ಷಾ ಶುಲ್ಕ ಪಾವತಿಸಲು ಈ ಕೆಳಕಂಡ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

| ಕ್ರ.ಸಂ | ವಿವರಗಳು | ಅಂತಿಮ ದಿನಾಂಕ |
|---|---|---|
| 1 | ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳನ್ನು ಆನ್‌ಲೈನ್ ಮುಖಾಂತರ ಪಾವತಿಸಿ ಹಾಗೂ ಶುಲ್ಕ ಪಾವತಿಸಿದ ನಂತರ ಪರೀಕ್ಷಾ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು (ವಿದ್ಯಾರ್ಥಿಗಳು UUCMS ಅಡಿಯಲ್ಲಿ ಪರೀಕ್ಷಾ ಶುಲ್ಕಗಳನ್ನು ಪಾವತಿಸುವ ಸಂದರ್ಭದಲ್ಲಿ ತಮ್ಮ ಕೋರ್ಸಿನ ಪತ್ರಿಕೆಗಳನ್ನು ಪರಿಶೀಲಿಸಿ ಆಯ್ಕೆ ಮಾಡಿಕೊಳ್ಳುವುದು). | 29–05–2024 |
| 2 | ರೂ.100/–ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕಡೆಯ ದಿನಾಂಕ ($1^{st}$ penalty) | 30–05–2024 |
| 3 | ರೂ.200/–ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕಡೆಯ ದಿನಾಂಕ ($2^{nd}$ penalty) | 31–05–2024 |
| 4 | $C_1$ & $C_2$ (continuous assessment) ಅಂಕಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಹಾಗೂ ಹಾಜರಾತಿಯನ್ನು ಅಪ್‌ಲೋಡ್ ಮಾಡುವ ದಿನಾಂಕ | 08–06–2024 |
| 5 | ಪ್ರವೇಶ ಪತ್ರಗಳ ಮುದ್ರಣದ ನಂತರ ಈ ಕಛೇರಿಗೆ ವಿದ್ಯಾರ್ಥಿಗಳು ಪಾವತಿಸಿರುವ ಪರೀಕ್ಷಾ ಶುಲ್ಕಗಳ ಮಾಹಿತಿಯನ್ನು ಕ್ರೋಢಿಕರಿಸಿ ಈ ಕಛೇರಿಗೆ ಸಲ್ಲಿಸುವುದು. | 10–06–2024 |
| 6 | ವೇಳಾಪಟ್ಟಿ ಮತ್ತು ಪ್ರಶ್ನೆಪತ್ರಿಕೆ ಬೇಡಿಕೆಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಅಂತಿಮ ದಿನಾಂಕ | 01–06–2024 |
| 7 | ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ | 17–06–2024 |

### ವಿಶೇಷ ಸೂಚನೆಗಳು:

1. ಒಂದನೇ ಸೆಮಿಸ್ಟರ್‌ನ ಪರೀಕ್ಷಾ ಕಾರ್ಯಗಳು UUCMS ಅಡಿಯಲ್ಲಿರುವುದರಿಂದ ಕಾಲೇಜಿನ ವತಿಯಿಂದ "academic moduleನಲ್ಲಿ curiculam mapping" ಮಾಡಿದ ನಂತರ, ವಿದ್ಯಾರ್ಥಿಗಳು ಆನ್‌ಲೈನ್ (UUCMS) ಮೂಲಕ ಪತ್ರಿಕೆಗಳನ್ನು ಆಯ್ಕೆ ಮಾಡಿಕೊಂಡು "mapping" ಮಾಡಲು ಕಾಲೇಜಿನವರು QP Code/Course Code ಗಳನ್ನು ನೀಡಬೇಕು ಹಾಗೂ ಆನ್‌ಲೈನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸಲು ಮಾರ್ಗದರ್ಶನ ನೀಡುವುದು.

2. ಕಾಲೇಜಿನ ಆಡಳಿತ ವರ್ಗ ಹಾಗೂ ಸಿಬ್ಬಂದಿ, ವಿದ್ಯಾರ್ಥಿಗಳು ಭರ್ತಿ ಮಾಡಿದ ವಿಷಯಗಳ ಆಯ್ಕೆ (subject selection) ಹಾಗೂ ಪರೀಕ್ಷಾ ಅರ್ಜಿಗಳಲ್ಲಿ ನ್ಯೂನತೆಗಳಿದ್ದರೆ, (ಪ್ರವೇಶ ಪತ್ರಗಳ ಮುದ್ರಣಕ್ಕೆ ಸಂಬಂಧಿಸಿದಂತೆ, ಪ್ರಾಂಶುಪಾಲರ ಅನುಮೋದನೆ ಪಡೆಯುವ ಮೊದಲು ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಂಡಿರುವ ಪತ್ರಿಕೆಗಳನ್ನು ಪುನಃ ಪರಿಶೀಲಿಸಿಕೊಳ್ಳುವುದು, ಇಲ್ಲದಿದ್ದರೆ ಕಾಲೇಜಿನ ಪ್ರಾಂಶುಪಾಲರು ಇಂತಹ ತಪ್ಪುಗಳಿಗೆ ಹೊಣೆಗಾರರಾಗಿರುತ್ತಾರೆ

ಪರೀಕ್ಷಾ ಶುಲ್ಕಗಳ ವಿವರಗಳು :

| | | |
|---|---|---|
| I | **M.B.A. Course :** | |
| | a) Whole Exam (Per Sem/Exam) | ₹ **2,662/-** |
| | b) Per Paper | ₹ **690/-** |
| II | **Marks Card Fee (Per Year/Semester)** | ₹ **387/-** |

ಸೂಚನೆಗಳು:

1. ದಿನಾಂಕ: 17-06-2024 ರಿಂದ ಪ್ರಾರಂಭವಾಗುವಂತೆ ಬೆಳಗ್ಗೆ 10:00 ಗಂಟೆಯಿಂದ ಮಧ್ಯಾಹ್ನ 1:00 ಗಂಟೆಯವರೆಗೆ ಇರುವಂತೆ ವೇಳಾಪಟ್ಟಿಯನ್ನು ಸಿದ್ಧಪಡಿಸಿ 05 ಪ್ರತಿಗಳನ್ನು ಅನುಮೋದನೆಗೆ ಕಳುಹಿಸುವುದು. ವೇಳಾಪಟ್ಟಿಯಲ್ಲಿ ಸರಿಯಾದ **Question Paper Code** ಮತ್ತು **Title** ಅನ್ನು ನಮೂದಿಸುವುದು.
2. ವಿದ್ಯಾರ್ಥಿಯು ಪರೀಕ್ಷೆಗೆ ಹಾಜರಾಗಲು ಅರ್ಹತೆಗೆ ಸಂಬಂಧಿಸಿದ ನಿಯಮಗಳ/ನಿಬಂಧನೆಗಳನ್ನು ಪೂರೈಸದ ವಿದ್ಯಾರ್ಥಿಗಳು ಕೇವಲ ಪರೀಕ್ಷಾ ಶುಲ್ಕ ಪಾವತಿ ಮಾಡಿ ಪರೀಕ್ಷೆಯ ಅಭ್ಯರ್ಥನ ಪತ್ರ ಸಲ್ಲಿಸಿದ ಮಾತ್ರಕ್ಕೆ ಅರ್ಹರಾಗುವುದಿಲ್ಲ.
3. ಸುತ್ತೋಲೆ ಸಂಖ್ಯೆ: ವಿಇ/1/9/2013-14, ದಿನಾಂಕ: 25-09-2013 ಪ್ರಕಾರ 2013-14ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕೋತ್ತರ/ಡಿಪ್ಲೋಮ/ಕೋರ್ಸ್‌ಗಳಲ್ಲಿ ಪ್ರವೇಶಾತಿ ಪಡೆದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ 2.5 ಲಕ್ಷದೊಳಗಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿ ಶುಲ್ಕ, ಬೋಧನಾ ಶುಲ್ಕ, ಪರೀಕ್ಷಾ ಶುಲ್ಕ, ಅಂಕಪಟ್ಟಿ ಶುಲ್ಕ ಮತ್ತು ಅಂತಿಮ ಪದವಿ ಪ್ರಮಾಣ ಪತ್ರದ ಶುಲ್ಕಗಳನ್ನು ಕಟ್ಟಿಸಿಕೊಳ್ಳಬಾರದೆಂದು ಸರ್ಕಾರದ ಆದೇಶವಿರುತ್ತದೆ. ಇದರಂತೆ ಕ್ರಮತೆಗೆದುಕೊಳ್ಳುವುದು.
4. ಪ್ರವರ್ಗ-1 ಮತ್ತು ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ಪಡೆಯಲು ಅರ್ಹರಾದ ಇತರೆ ವರ್ಗಗಳಿಗೆ (ಸಾಮಾನ್ಯ ವರ್ಗದವರನ್ನು ಒಳಗೊಂಡಂತೆ) ಸೇರಿದ ಅಭ್ಯರ್ಥಿಗಳಿಗೆ ಅವರ ಪೋಷಕರ ವಾರ್ಷಿಕ ವರಮಾನದ ಆಧಾರದ ಮೇಲೆ ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಆದರೂ, ಅಂತಹ ಅಭ್ಯರ್ಥಿಗಳು ನಿಗದಿಪಡಿಸಿದಂತೆ, ಅಂಕಪಟ್ಟಿ ಶುಲ್ಕ ರೂ. 387/-ಗಳನ್ನು ಪಾವತಿ ಮಾಡಬೇಕು.
5. ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಅವರ ಪೋಷಕರ ಆದಾಯ ರೂ.2.5 ಲಕ್ಷಗಳು ಮೀರಿದಲ್ಲಿ ಅವರುಗಳಿಂದ ಪೂರ್ಣ ಪರೀಕ್ಷಾ ಶುಲ್ಕ ಸಂಗ್ರಹಿಸುವುದು.
7. ಒಮ್ಮೆ ಪಾವತಿ ಮಾಡಿದ ಪರೀಕ್ಷಾ ಶುಲ್ಕವನ್ನು ಯಾವುದೇ ಸಂದರ್ಭದಲ್ಲಿಯೇ ಆಗಲಿ ಮರುಪಾವತಿ ಮಾಡಲಾಗುವುದಿಲ್ಲ ಅಥವಾ ಮುಂದಿನ ಪರೀಕ್ಷೆಗೆ ಹೊಂದಾಣಿಕೆ ಮಾಡಲಾಗುವುದಿಲ್ಲ.
8. ವಿಶ್ವವಿದ್ಯಾನಿಲಯದಿಂದ ವಿದ್ಯಾರ್ಥಿಗಳ ಪ್ರವೇಶ ಅನುಮೋದನೆ ಪಡೆದಿರುವ ಬಗೆಗೆ ಮುಖ್ಯಸ್ಥರು ಅಭ್ಯರ್ಥನ ಪಟ್ಟಿಯಲ್ಲಿ ದೃಢೀಕರಿಸಬೇಕು.
9. ಸ್ನಾತಕೋತ್ತರ ಪದವಿ ಶೈಕ್ಷಣಿಕ ವರ್ಷದಲ್ಲಿ ನಿಬಂಧನೆಗಳಿಗನುಸಾರವಾಗಿ ಹಾಜರಾತಿ ಕೊರತೆ ಇರುವ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅನುಮತಿ ನೀಡಲಾಗುವುದಿಲ್ಲ.
10. ಪರೀಕ್ಷೆಯ ಒಂದು ಭಾಗವಾಗಿರುವ ಮಹಾನಿಬಂಧ/ಪ್ರೌಢ ಪ್ರಬಂಧ/ಪ್ರಾಜೆಕ್ಟ್ ಕಾರ್ಯ/ಕ್ಷೇತ್ರಕಾರ್ಯ ವರದಿ ಇತ್ಯಾದಿಗಳನ್ನು ನಿರ್ದಿಷ್ಟ ವಿಷಯದಲ್ಲಿನ ಲಿಖಿತ ಪರೀಕ್ಷೆಯ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚಿತವಾಗಿ ಅಧ್ಯಯನ ವಿಭಾಗಗಳ ಸಂಬಂಧಪಟ್ಟ ಅಧ್ಯಕ್ಷರು/ಮುಖ್ಯಸ್ಥರಿಗೆ ದ್ವಿಪ್ರತಿಗಳಲ್ಲಿ ಸಲ್ಲಿಸಬೇಕು. ಪ್ರೌಢಪ್ರಬಂಧದಲ್ಲಿ ವಿದ್ಯಾರ್ಥಿಯ ಹೆಸರು ಮತ್ತು ನೋಂದಣಿ ಸಂಖ್ಯೆಯನ್ನು ತಪ್ಪದೆ ನಮೂದಿಸುವುದು.

ವಿಶೇಷ ಸೂಚನೆ:

1. ಪಠ್ಯಕ್ರಮದಲ್ಲಿ ಅಥವಾ ಪರೀಕ್ಷೆಗೆ ಸಂಬಂಧಿಸಿದ ಯಾವುದೇ ರೀತಿಯ ಬದಲಾವಣೆಯಿದ್ದಲ್ಲಿ ಸದರಿ ವಿಭಾಗದ ಅಧ್ಯಕ್ಷರು ಬದಲಾವಣೆಯ ವಿವರಗಳೊಂದಿಗೆ ಕಂಪ್ಯೂಟರ್ ವಿಭಾಗದ ಮುಖ್ಯಸ್ಥರನ್ನು ಭೇಟಿಯಾಗಬೇಕೆಂದು ಕೋರಲಾಗಿದೆ.

MBA

2. ಪರೀಕ್ಷೆಗಳಿಗೆ **Bar Coded/OMR** ಉತ್ತರ ಪತ್ರಿಕೆಗಳನ್ನು ಉಪಯೋಗಿಸಬೇಕು. ಇದಕ್ಕೆ ಪೂರಕವಾಗಿ ಪ್ರತಿ ವಿದ್ಯಾರ್ಥಿಗೆ **Student ID** ಯನ್ನು ಹಾಗೂ ಪ್ರತಿ ಪ್ರಶ್ನೆ ಪತ್ರಿಕೆಗೆ **Question Paper Code** ಅನ್ನು ನೀಡಲಾಗಿದೆ. **Question Paper Code** ಗಳ ಮಾಹಿತಿ ಬೇಕಾದಲ್ಲಿ ಪರೀಕ್ಷಾ ವಿಭಾಗದ ಗಣಕ ಕೇಂದ್ರದಿಂದ ಪಡೆಯಬೇಕು.
3. ಪರೀಕ್ಷಾ ಅರ್ಜಿಯ ಖಾಲಿ ಫಾರಂಗಳನ್ನು ನೀಡಲಾಗುವುದು. ಈ ಅರ್ಜಿಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಿ ಅವರಿಂದ ಮಾಹಿತಿ ಪಡೆದು **Online** ಮೂಲಕ ಸಲ್ಲಿಸಬೇಕು. **Online**ನಲ್ಲಿ ಪ್ರವೇಶ ಪತ್ರ ಪಡೆದು ಅಭ್ಯರ್ಥನಾ ಪಟ್ಟಿಯ ಜೊತೆಯಲ್ಲಿ ಪ್ರವೇಶ ಪತ್ರ ಅನುಮೋದನೆಗೆ ಪರೀಕ್ಷಾ ವಿಭಾಗಕ್ಕೆ ಸಲ್ಲಿಸಬೇಕು.
4. ಸಂಬಂಧಪಟ್ಟ ಕಾಲೇಜು/ಸ್ನಾತಕೋತ್ತರ ಕೇಂದ್ರದ ಮುಖ್ಯಸ್ಥರುಗಳು ದಿನಂಪ್ರತಿ ಪರೀಕ್ಷೆ ಮುಗಿದ ಆ ದಿನವೇ ಉತ್ತರ ಪತ್ರಿಕೆ ಬಂಡಲ್‌ಗಳನ್ನು ಸೀಲ್ ಮಾಡಿ ಅಂಚೆ ಮೂಲಕ ಅಥವಾ ಖುದ್ದಾಗಿ ಕುಲಸಚಿವ(ಪರೀಕ್ಷಾಂಗ) ರವರ ವಿಭಾಗಕ್ಕೆ ಕಳುಹಿಸಲು ಕ್ರಮಕೈಗೊಳ್ಳುವುದು.

## ಪರೀಕ್ಷಾ ಮುಖ್ಯ ಮೇಲ್ವಿಚಾರಕರ ಕರ್ತವ್ಯಗಳು

ಸಂಬಂಧಪಟ್ಟ ಮುಖ್ಯಸ್ಥರನ್ನು ಪರೀಕ್ಷಾ ಮುಖ್ಯ ಮೇಲ್ವಿಚಾರಕರಾಗಿ ನೇಮಿಸಲಾಗಿದೆ. ಪರೀಕ್ಷೆಗಳು ಸುಗಮವಾಗಿ ನಡೆಯಲು ಮುಖ್ಯ ಮೇಲ್ವಿಚಾರಕರು "Manual for conduct of examination" ಪ್ರಕಾರ ಕ್ರಮ ತೆಗೆದುಕೊಳ್ಳುವುದು.

1415

ಕುಲಸಚಿವ (ಪರೀಕ್ಷಾಂಗ)

ಇವರಿಗೆ:

1. ಅಧ್ಯಕ್ಷರು, ವ್ಯವಹಾರ ಆಡಳಿತ ಅಧ್ಯಯನ ವಿಭಾಗ, (BIMS) ಮಾನಸಗಂಗೋತ್ರಿ, ಮೈಸೂರು,
2. ಪ್ರಾಂಶುಪಾಲರು, ಮಹಾರಾಣಿ ವಾಣಿಜ್ಯ ಮತ್ತು ವ್ಯವಹಾರ ಮಹಿಳಾ ಕಾಲೇಜು, ಪಡುವರಹಳ್ಳಿ, ಮೈಸೂರು.
3. ಪ್ರಾಂಶುಪಾಲರು, ಪರಿವರ್ತನ ಪ್ರಥಮ ದರ್ಜೆ ಕಾಲೇಜು, ಮೇಟಗಳ್ಳಿ, ಮೈಸೂರು.
4. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
5. ನಿರ್ದೇಶಕರು, ವಿಶ್ವವಿದ್ಯಾನಿಲಯ ಮುದ್ರಣಾಲಯ, ಮಾನಸಗಂಗೋತ್ರಿ, ಮೈಸೂರು.
6. ಎಲ್ಲಾ ಉಪ/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ವಿಶೇಷಾಧಿಕಾರಿಗಳು, ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಅಧೀಕ್ಷಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಮಾನ್ಯ ಕುಲಪತಿ/ಕುಲಸಚಿವ/ ಕುಲಸಚಿವ (ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಕಾರ್ಯನಿರ್ವಾಹಕರು, ಪ.ವಿ.8.7 ಮತ್ತು ಪ.ವಿ.1.7, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು- ಸೂಕ್ತ ಕ್ರಮಕ್ಕಾಗಿ.
11. ಅಧ್ಯಕ್ಷರು, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – ಈ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯ ವೆಬ್‌ಸೈಟ್‌ನಲ್ಲಿ Upload ಮಾಡಲು ಕೋರಿದೆ.
12. ಕಛೇರಿ ಪ್ರತಿ.